# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ | 343 (312) |
| ಸದಸ್ಯರ ಹೆಸರು | ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 13.08.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲ್ಲೂಕಿನ ಕೂಡಲ ಸಂಗಮ ಅಭಿವೃದ್ಧಿಯು ಕುಂಟುತ್ತಾ ಸಾಗುತ್ತಿದ್ದು, ಕೂಡಲ ಸಂಗಮದಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಬಿಂಬಿತವಾಗುವಂತೆ ಅಲ್ಲಿ ಬಸವ ಅಂತರಾಷ್ಟ್ರೀಯ ಕೇಂದ್ರ ನಿರ್ಮಿಸುತ್ತಿದ್ದು, ಇಲ್ಲಿಯವರೆಗೂ ಕಟ್ಟಡದ ಕಾಮಗಾರಿ ಪ್ರಗತಿಯು ಆಮೆಗತಿಯಲ್ಲಿ ಸಾಗುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೂಡಲಸಂಗಮದಲ್ಲಿ ದೆಹಲಿಯ ಅಕ್ಷರಧಾಮ ಮಾದರಿಯಲ್ಲಿ ಕೃಷ್ಣಭಾಗ್ಯ ಜಲನಿಗಮ ನಿಯಮಿತದ ವತಿಯಿಂದ ಬಸವ ಅಂತಾರಾಷ್ಟ್ರೀಯ ಕೇಂದ್ರ ನಿರ್ಮಾಣ ಕಾರ್ಯವು ನಡೆಯುತ್ತಿದ್ದು, ಕೋವಿಡ್-2019 ಹಾಗೂ ಇನ್ನಿತರ ತಾಂತ್ರಿಕ ಕಾರಣಗಳಿಂದಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ವಿಳಂಬವಾಗಿದೆ. |
| ಆ | ಬಸವ ಅಂತರಾಷ್ಟ್ರೀಯ ಕೇಂದ್ರವನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ಸಹ ಈಗಾಗಲೇ ಮ್ಯುಜಿಯಂನ ನಿರ್ಮಾಣ ಕಾಮಗಾರಿಯ ಎ, ಬಿ, ಸಿ ಮತ್ತು ಎಫ್ ಬ್ಲಾಕ್‌ಗಳ ಕಾಮಗಾರಿಯು ಮುಗಿದಿರುತ್ತದೆ.<br><br>ಉಳಿದ ಡಿ ಮತ್ತು ಇ ಬ್ಲಾಕ್‌ಗಳ ಕಾಮಗಾರಿಯನ್ನು ಪೂರ್ಣಗೊಳಿಸಲು ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಭಾಗ್ಯ ಜಲನಿಗಮ ನಿಯಮಿತ, ಬೆಂಗಳೂರು ಇವರಿಂದ ಅಂದಾಜು ಪ್ರತಿಗೆ ಆಡಳಿತಾತ್ಮಕ ಅನುಮೋದನೆಯನ್ನು ಹಾಗೂ ಸಮಾಲೋಚಕರಿಂದ ವಿಸ್ತೃತ ವಿನ್ಯಾಸ ವರದಿಯನ್ನು ನಿರೀಕ್ಷಿಸಲಾಗುತ್ತಿದೆ.<br><br>ಜೊತೆಗೆ, ಬಸವ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಶ್ರೀ ಬಸವಣ್ಣನವರ ಜೀವನ, ಹೋರಾಟ ಹಾಗೂ ವಚನಗಳ ತತ್ವ ಸಂದೇಶಗಳನ್ನುಸಾರುವಂತಹ ಕಲಾಕೃತಿಗಳನ್ನು ರಚನೆ ಮಾಡುವ ಕಾಮಗಾರಿಯು ಬಾಕಿ ಇದ್ದು, ಈ ಕುರಿತು ತಜ್ಞರ ವರದಿ ನಿರೀಕ್ಷಿಸಲಾಗುತ್ತಿದೆ.<br><br>ಸದರಿ ವರದಿಗಳು ಲಭ್ಯವಾದ ಕೂಡಲೇ ಬಸವ ಅಂತಾರಾಷ್ಟ್ರೀಯ ಕೇಂದ್ರದ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು. |

ಕಂಇ 191 ಆರ್‌ಬಿಎ 2025

**(ಕೃಷ್ಣ ಬೈರೇಗೌಡ)**
**ಕಂದಾಯ ಸಚಿವರು**